# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1061
2. ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 14-12-2023
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆ ಜಾರಿಯಾಗಿದೆಯೇ; | ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ರೂಪಿಸಿರುವ ನಗದು ರಹಿತ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯ ಅನುಷ್ಠಾನಗೊಳಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |
| ಆ) | ಸದರಿ ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಿಗುವ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳ ವಿವರಗಳೇನು; | KASS ಯೋಜನೆಯಡಿ ಕೇಂದ್ರದ CGHS ವ್ಯವಸ್ಥೆಯಡಿ ಒಳಗೊಂಡಿರುವ ಚಿಕಿತ್ಸಾ ವಿಧಾನಗಳು, ವೈದ್ಯರ ಸಮಾಲೋಚನೆ, ವೈದ್ಯಕೀಯ ತಪಾಸಣೆಗಳು, ಶಸ್ತ್ರಚಿಕಿತ್ಸೆಗಳು, ವೈದ್ಯಕೀಯ ನಿರ್ವಹಣೆ ಮುಂತಾದ ವೈದ್ಯಕೀಯ ಸೇವೆಗಳು ಒಳಗೊಂಡಿರುತ್ತದೆ. ಈ ಯೋಜನೆಯಡಿಯ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳನ್ನು ದಿನಾಂಕ:05.09.2022 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್ಎಂಆರ್ 2020 ರಲ್ಲಿ ವಿವರಿಸಲಾಗಿದೆ. |
| ಇ) | ಸದರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಸರ್ಕಾರ ರೂಪಿಸಿರುವ ನಿಯಮ ಹಾಗೂ ಮಾನದಂಡಗಳೇನು; | ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ರೂಪಿಸಿರುವ ನಗದು ರಹಿತ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರ ಭಾಗವಾಗಿ ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಈ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಕಾಲ ಕಾಲಕ್ಕೆ ಮಾರ್ಗಸೂಚಿಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | | ಅಲ್ಲದೇ, ಖಾಸಗಿ ಆಸ್ಪತ್ರೆಗಳನ್ನು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)" ಯಡಿ ಭಾವಿತ ನೋಂದಾವಣೆಗೆ (Deemed Empanelment) ಒಳಪಡಿಸಲು ದಿನಾಂಕ: 09.03.2023ರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್ಎಂಆರ್ 2020 (ಭಾ-5) ರಲ್ಲಿ ಅನುಮತಿಸಲಾಗಿದೆ.<br><br>ಈ ಯೋಜನೆಯಡಿ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಎಲ್ಲಾ ಅಂಶಗಳನ್ನು ಸಮಗ್ರವಾಗಿ ಒಳಗೊಂಡ ನೂತನ ಒಪ್ಪಂದ ವನ್ನು(MoU) ಖಾಸಗಿ ಆಸ್ಪತ್ರೆಗಳ ಜೊತೆ ಮಾಡಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಈ) | ಸದರಿ ಯೋಜನೆಯು ಅನುಷ್ಠಾನಕ್ಕೆ ಬಂದ ನಂತರ ಇದುವರೆಗೆ ಎಷ್ಟು ಜನ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ನಗದು ರಹಿತ ವೈದ್ಯಕೀಯ ಸೇವೆ ಯೋಜನೆಯ ಲಾಭ ಪಡೆದಿದ್ದಾರೆ ಮತ್ತು ಅದಕ್ಕೆ ಖರ್ಚಾಗಿರುವ ಅನುದಾನದ ವಿವರಗಳೇನು? | "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯನ್ನು ಅನುಷ್ಠಾನಗೊಳಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ. |

ಇ-ಕಡತ ಸಂಖ್ಯೆ: DPAR/139/SMR/2023

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**